ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಇತರ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ    ದಿನಾಂಕ : DATE : 11/07/2019

# ಕಾಂಗ್ರೆಸ್‌ಗೀಗ ಗೋವಾ ಶಾಕ್

## ಕಾಂಗ್ರೆಸ್‌ನ 15ರ ಪೈಕಿ 10 ಶಾಸಕರು ಬಿಜೆಪಿಗೆ | ಗೋವಾದಲ್ಲೂ ಕರ್ನಾಟಕ ಬೆಳವಣಿಗೆ

## ಅಲ್ಪ ಬಹುಮತದಿಂದ ಸರ್ಕಾರ ನಡೆಸುತ್ತಿದ್ದ ಬಿಜೆಪಿಗೆ ಈಗ ಪೂರ್ಣ ಬಹುಮತ ಲಭ್ಯ

ಪಣಜಿ: ಅತ್ತ ಕರ್ನಾಟಕದಲ್ಲಿ ಸರ್ಕಾರ ಉಳಿಸಿಕೊಳ್ಳಲು ಕಾಂಗ್ರೆಸ್ ಹರಸಾಹಸ ಪಡುತ್ತಿರುವಾಗಲೇ, ಇತ್ತ ಗೋವಾದಲ್ಲಿ ಕಾಂಗ್ರೆಸ್‌ನ 15 ಶಾಸಕರ ಪೈಕಿ 10 ಶಾಸಕರು ಬಿಜೆಪಿ ಸೇರಿದ್ದಾರೆ. ಇದರೊಂದಿಗೆ ಲೋಕಸಭಾ ಚುನಾವಣೆಯ ಹೀನಾಯ ಸೋಲು, ಬಳಿಕ ಪಕ್ಷದ ಅಧ್ಯಕ್ಷ ಸ್ಥಾನಕ್ಕೆ ರಾಹುಲ್ ರಾಜೀನಾಮೆ ಬಳಿಕ ಹತಾಶೆಯಲ್ಲಿದ್ದ ಕಾಂಗ್ರೆಸ್‌ಗೆ ಭಾರೀ ಮುಖಭಂಗವಾಗಿದೆ.

| ಈಗ ಬಲಾಬಲ | |
|---|---|
| ಒಟ್ಟು ಸ್ಥಾನ | 40 |
| ಬಹುಮತಕ್ಕೆ | 21 |
| ಬಿಜೆಪಿ | 27 |
| ಜಿಎಫ್‌ಪಿ | 03 |
| ಪಕ್ಷೇತರರು | 03 |
| ಕಾಂಗ್ರೆಸ್ | 05 |
| ಎನ್‌ಸಿಪಿ | 01 |
| ಎಂಜಿಪಿ | 01 |

ಕಾಂಗ್ರೆಸ್ ಶಾಸಕರ ಸೇರ್ಪಡೆಯಿಂದಾಗಿ ಅಲ್ಪ ಬಹುಮತದೊಂದಿಗೆ ಸರ್ಕಾರ ನಡೆಸುತ್ತಿದ್ದ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ನೇತೃತ್ವದ ಬಿಜೆಪಿ ಸರ್ಕಾರಕ್ಕೆ ಸ್ಪಷ್ಟ ಬಹುಮತ ಸಿಕ್ಕಿದಂತಾಗಿದೆ.

**ಏನಾಯ್ತು?:** ಕೆಲ ದಿನಗಳಿಂದ ಕಾಂಗ್ರೆಸ್‌ನ ಒಂದು ಗುಂಪು ಬಿಜೆಪಿ ಸೇರುವ ಬಗ್ಗೆ ಗುಸುಗುಸು ಕೇಳಿಬಂದಿತ್ತು. ಆದರೆ ಅವರನ್ನು ತಡೆಯಲು ಕಾಂಗ್ರೆಸ್ ಹೈಕಮಾಂಡ್ ಪ್ರಯತ್ನವನ್ನೇ ನಡೆಸಿರಲಿಲ್ಲ. ಅದರ ಬೆನ್ನಲ್ಲೇ ಬುಧವಾರ ಗೋವಾ ವಿಧಾನಸಭೆಯ ವಿಪಕ್ಷ ಕಾಂಗ್ರೆಸ್ ನಾಯಕರಾಗಿರುವ ಚಂದ್ರಕಾಂತ್ ಕವ್ಲೇಕರ್ ನೇತೃತ್ವದ 10 ಕಾಂಗ್ರೆಸ್ ಶಾಸಕರು, ಸ್ಪೀಕರ್ ರಾಜೇಶ್ ಪಟ್ನೇಕರ್ ಅವರನ್ನು ಭೇಟಿ ಮಾಡಿ, ತಾವು ಕಾಂಗ್ರೆಸ್‌ನಿಂದ ಹೊರಹೋಗಿ ಬಿಜೆಪಿ ಸೇರುತ್ತಿರುವ ಕುರಿತು ಪತ್ರ ನೀಡಿದರು.

### ಪರಿಣಾಮ ಏನು?

40 ಸದಸ್ಯ ಬಲದ ಗೋವಾ ವಿಧಾನಸಭೆಯಲ್ಲಿ ಬಹುಮತಕ್ಕೆ 21 ಸ್ಥಾನ ಬೇಕು. 17 ಸ್ಥಾನ ಗೆದ್ದಿರುವ ಬಿಜೆಪಿ, ಜಿಎಫ್‌ಪಿಯ 3, 3 ಪಕ್ಷೇತರರ ಬೆಂಬಲದೊಂದಿಗೆ ಸರ್ಕಾರ ರಚಿಸಿದೆ. ಕಾಂಗ್ರೆಸ್ 15, ಎನ್‌ಸಿಪಿ 1, ಎಂಜಿಪಿಯು ತಲಾ 1 ಸದಸ್ಯ ಬಲ ಹೊಂದಿವೆ. ಇದೀಗ ಕಾಂಗ್ರೆಸ್‌ನ 10 ಸದಸ್ಯರು ಬಿಜೆಪಿ ಸೇರಿದ ಕಾರಣ, ಬಿಜೆಪಿಗೆ ಸ್ಪಷ್ಟ ಬಹುಮತ ಸಿಕ್ಕಿದೆ.



ಗೋವಾ ಕಾಂಗ್ರೆಸ್ ಶಾಸಕರು ಸ್ಪೀಕರ್ ಭೇಟಿಯಾಗಿ ಬಿಜೆಪಿ ಸೇರಿದ ಮಾಹಿತಿ ನೀಡಿದ ಕ್ಷಣ.

# ಕರ್ನಾಟಕ, ಗೋವಾ ಎಫೆಕ್ಟ್: ಮ.ಪ್ರದೇಶ ಮತ್ತಷ್ಟು ಅಲರ್ಟ್

## ಶಾಸಕರ ಜೊತೆ ಸಿಎಂ ಕಮಲ್‌ನಾಥ್ ನಿರಂತರ ಸಂಪರ್ಕ

ಭೋಪಾಲ್: ಕರ್ನಾಟಕ ಮತ್ತು ಗೋವಾ ಸರ್ಕಾರದಲ್ಲಿ ನಡೆದಿರುವ ರಾಜಕೀಯ ಬೆಳವಣಿಗೆಗಳು ನೆರೆಯ ಮಧ್ಯಪ್ರದೇಶ ಕಾಂಗ್ರೆಸ್ ಸರ್ಕಾರಕ್ಕೆ ಮತ್ತಷ್ಟು ನಡುಕ ಹುಟ್ಟುಹಾಕಿದೆ. ಹೀಗಾಗಿ ರಾಜ್ಯದಲ್ಲಿ ಯಾವುದೇ ಕಾರಣಕ್ಕೂ ಅಧಿಕಾರಕ್ಕೆ ತಪ್ಪಬಾರದು ಎನ್ನುವ ಕಾರಣಕ್ಕಾಗಿ ಮುಖ್ಯಮಂತ್ರಿ ಕಮಲ್‌ನಾಥ್ ಅವರು ಕಾಂಗ್ರೆಸ್ ಶಾಸಕರು ಸೇರಿದಂತೆ, ಸರ್ಕಾರಕ್ಕೆ ಬೆಂಬಲ ನೀಡಿರುವ ಮೈತ್ರಿ ಪಕ್ಷಗಳ ಶಾಸಕರ ಜೊತೆಗೂ ನಿರಂತರ ಸಂಪರ್ಕ ಹೊಂದಿದ್ದಾರೆ ಎನ್ನಲಾಗಿದೆ.

ಮಧ್ಯಪ್ರದೇಶ ವಿಧಾನಸಭೆಯ ಮುಂಗಾರು ಅಧಿವೇಶನ ಬುಧವಾರ ಆರಂಭವಾಗಿದೆ. ಶೀಘ್ರವೇ ಹಣಕಾಸು ಮಸೂದೆಗೆ ಅನುಮೋದನೆ ಪಡೆದುಕೊಳ್ಳಲು ಸರ್ಕಾರ ಉದ್ದೇಶಿಸಿದೆ. ಒಂದು ವೇಳೆ ಹಣಕಾಸು ಮಸೂದೆಯ ವೇಳೆ ಶಾಸಕರ ಕೊರತೆ ಬಿದ್ದರೆ, ವಿಪಕ್ಷಗಳು ಮಸೂದೆಯನ್ನು ಮತಕ್ಕೆ ಹಾಕಲು ಕೋರುವ ಸಾಧ್ಯತೆ ಇದೆ. ಒಂದು ವೇಳೆ ಹಾಗೇನಾದರೂ ಆಗಿ ಹಣಕಾಸು ಮಸೂದೆಗೆ ಸೋಲಾದರೆ ಸಿಎಂ ರಾಜೀನಾಮೆ ನೀಡುವುದು ಅನಿವಾರ್ಯವಾಗುತ್ತದೆ. ಹೀಗಾಗಿ ಹಣಕಾಸು ಮಸೂದೆ ಸೇರಿದಂತೆ ಪ್ರಮುಖ ಮಸೂದೆಗಳು ಅಂಗೀಕಾರವಾಗುವವರೆಗೂ ರಾಜಧಾನಿ ಬಿಟ್ಟು ತೆರಳಬೇಡಿ ಎಂದು ಆಡಳಿತಾರೂಢ ಕಾಂಗ್ರೆಸ್ ಮತ್ತು ಸರ್ಕಾರಕ್ಕೆ ಬೆಂಬಲ ನೀಡಿರುವ ಬಿಎಸ್‌ಪಿ, ಕಾಂಗ್ರೆಸ್ ಮತ್ತು ಪಕ್ಷೇತರ ಸದಸ್ಯರಿಗೆ ಕಮಲ್‌ನಾಥ್ ಸೂಚಿಸಿದ್ದಾರೆ.

230 ಸದಸ್ಯ ಬಲದ ಮಧ್ಯಪ್ರದೇಶದಲ್ಲಿ ಬಹುಮತಕ್ಕೆ 116 ಮತ ಬೇಕು. 114 ಸ್ಥಾನ ಗಳಿಸಿರುವ ಕಾಂಗ್ರೆಸ್ ಬಿಎಸ್ಪಿಯ 2, ಎಸ್ಪಿಯ ಒಬ್ಬ ಹಾಗೂ 4 ಪಕ್ಷೇತರ ಬೆಂಬಲದೊಂದಿಗೆ ಸರ್ಕಾರ ರಚಿಸಿದೆ. 109 ಸ್ಥಾನಗಳಿಸಿರುವ ಬಿಜೆಪಿ ವಿಪಕ್ಷ ಸ್ಥಾನದಲ್ಲಿದೆ.

34